# Visvesvaraya Technological University

"Jnana Sangama", Belagavi - 590 018, Karnataka State

**Dr. Satish Annigeri**
**REGISTRAR (I/C)**

**Phone : (0831) 2498100**
**Fax : (0831) 2405467**


**Ref VTU/BGM/Aca-OS/Gen-Cirs/2019-20/** 1605 **Date :** 12 JUN 2019

## CIRCULAR

**Sub: Tuition Fee Waiver Scheme under Supernumerary Quota for the academic year 2019-20– reg...**

**Ref: Govt. Order No. ED 10 TEC 2019 dt: 30-05-2019**

With reference to the above, please find enclosed herewith a copy of Govt. order No. ED 10 TEC 2019 dt: 30-05-2019 w.r.t. Tuition Fee Waiver Scheme under Supernumerary Quota for the academic year 2019-20.

This is for information and needful action.

**By ORDER**

**Encl: as above**

**REGISTRAR**

**To,**
**The of Principals of All Engineering Colleges under the ambit of VTU, Belagavi**

**Copy to:**
1. Hon'ble Vice-Chancellor through the Secretary to VC, VTU, Belagavi for kind information
2. The Regional Directors (I/C) of all the Regional Offices of VTU for kind information and send to circular to all colleges
3. The Computer Network Centre, VTU, Belagavi
4. The concerned Case workers of Academi, VTU, Belagavi

8/6/19

2897
- 6 JUN 2019

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2019-20 ನೇ ಸಾಲಿನ ತಾಂತ್ರಿಕ ಕೋರ್ಸುಗಳ ಪ್ರವೇಶಾತಿಗೆ ಬೋದನಾ ಶುಲ್ಕದ ವಿನಾಯಿತಿ ಯೋಜನೆ (Tuition Fee Waiver Scheme) (Supernumerary quota)ಯಡಿ ಆದಾಯ ಮಿತಿಯನ್ನು ನಿಗಧಿಪಡಿಸುವ ಬಗ್ಗೆ.

ಓದಲಾಗಿದೆ:

1) ದಿನಾಂಕ:26.02.2014ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಆಡಳಿತ ಮಂಡಳಿಯ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನಗಳು.
2) ಸರ್ಕಾರದ ಆದೇಶ ಸಂಖ್ಯೆ: ಇಡಿ 21 ಟಿಇಸಿ 2013, ದಿನಾಂಕ:09.07.2013
3) ಸರ್ಕಾರದ ಆದೇಶ ಸಂಖ್ಯೆ: ಇಡಿ 72 ಟಿಇಸಿ 2013, ದಿನಾಂಕ:23.05.2014.
4) ಸರ್ಕಾರದ ಆದೇಶ ಸಂಖ್ಯೆ: ಹಿಂವಕ 304 ಬಿಸಿಎ 2017, ದಿನಾಂಕ: 14.09.2018.

ಪ್ರಸ್ತಾವನೆ:

ಬಡ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ತಾಂತ್ರಿಕ ಕೋರ್ಸುಗಳ (ಪದವಿ/ಕೋರ್ಸುಗಳ) ಪ್ರವೇಶಾತಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಪೋಷಕರ ವಾರ್ಷಿಕ ಆದಾಯ ರೂ.2.50 ಲಕ್ಷಕ್ಕಿಂತ ಕಡಿಮೆಯಿರುವ ವಿದ್ಯಾರ್ಥಿಗಳಿಗೆ ಪ್ರತಿ ಕೋರ್ಸುಗಳ ಒಟ್ಟು ಪ್ರವೇಶ ಮಿತಿಯ ಮೇಲೆ ಶೇ.5 ರಷ್ಟು ಸಂಖ್ಯಾಧಿಕ ಸೀಟುಗಳನ್ನು (Supernumerary quota) ಬೋಧನಾ ಶುಲ್ಕದ ವಿನಾಯಿತಿ ಯೋಜನೆ (Tuition Fee Waiver Scheme) ಯಡಿ ಹಂಚಿಕೆ ಮಾಡುವ ಯೋಜನೆಯನ್ನು ಎಐಸಿಟಿಇ ಯು 2011-12ನೇ ಸಾಲಿನಲ್ಲಿ ಜಾರಿಗೆ ತಂದಿರುವುದಾಗಿದೆ. ಅದರಂತೆ, ಸದರಿ ಯೋಜನೆಯನ್ನು ರಾಜ್ಯದಲ್ಲಿ ಅಳವಡಿಸಿ ಮುಂದುವರೆಸಿಕೊಂಡು ಬರಲಾಗಿದೆ.

ಸದರಿ ಯೋಜನೆಯಡಿಯಲ್ಲಿನ ಪೋಷಕರ ವಾರ್ಷಿಕ ಆದಾಯ ಮಿತಿಯನ್ನು ಎಐಸಿಟಿಇಯ ಮಾರ್ಗಸೂಚಿಯನ್ವಯ ಮೇಲೆ (2) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ 2013-14ನೇ ಸಾಲಿಗೆ ರೂ.4.50 ಲಕ್ಷಕ್ಕೆ ಹಾಗೂ ಮೇಲೆ (3) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ 2014-15ನೇ ಸಾಲಿಗೆ ರೂ.6.00 ಲಕ್ಷಕ್ಕೆ ಮಿತಿಗೊಳಸಲಾಗಿರುತ್ತದೆ.

ಮೇಲೆ (4) ರಲ್ಲಿ ಓದಲಾದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆದೇಶದಲ್ಲಿ, ಸರ್ಕಾರಿ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿ:30.03.2002, ಅನುಬಂಧ-IIರ ಅಂಶ-3ರಲ್ಲಿ ಕೆನೆಪದರವನ್ನು ನಿರ್ಣಯಿಸಲು ಹಿಂದುಳಿದ ವರ್ಗಗಳ ಪ್ರವರ್ಗ-2ಎ, 2ಬಿ, 3ಎ, ಮತ್ತು 3ಬಿ ಗಳಿಗೆ ಅನ್ವಯಿಸುವಂತೆ ಕೆನೆಪದರಕ್ಕೆ ನಿಗಧಿಪಡಿಸಿರುವ ಅಭ್ಯರ್ಥಿಯ ಮತ್ತು ಅವರ ತಂದೆ-ತಾಯಿ/ಪೋಷಕರ ವಾರ್ಷಿಕ ಒಟ್ಟು ಆದಾಯ ಮಿತಿಯನ್ನು (Gross Annual Income) ರೂ.6.00 ಲಕ್ಷಗಳಿಂದ ರೂ.8.00 ಲಕ್ಷಗಳಿಗೆ ಹೆಚ್ಚಿಸಿ ಆದೇಶಿಸಿದೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆದೇಶದನ್ವಯ ಪೋಷಕರ ವಾರ್ಷಿಕ ಆದಾಯ ಮಿತಿಯನ್ನು ಈ ಕೆಳಕಂಡಂತೆ ಪರಿಷ್ಕರಿಸಲು ಸರ್ಕಾರವು ತೀರ್ಮಾನಿಸಿ, ಕೆಳಕಂಡಂತೆ ಆದೇಶಿಸಿದೆ.

RECEIVED OFFICE OF THE REGISTRAR
- 6 JUN 2019

**ಸರ್ಕಾರದ ಆದೇಶ ಸಂಖ್ಯೆ: ಇಡಿ 10 ಟಿಇಸಿ 2019.**
**ಬೆಂಗಳೂರು, ದಿನಾಂಕ:30ನೇ ಮೇ 2019.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಹಿನ್ನೆಲೆಯಲ್ಲಿ ರಾಜ್ಯದ ಬಡ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ತಾಂತ್ರಿಕ ಕೋರ್ಸುಗಳ (ಪದವಿ/ಡಿಪ್ಲೋಮೊ) ಪ್ರವೇಶಾತಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಸಂಖ್ಯಾಧಿಕ ಸೀಟುಗಳನ್ನು ಮೆರಿಟ್ ಆಧಾರದ ಮೇರೆಗೆ ಬೋದನಾ ಶುಲ್ಕದ ವಿನಾಯಿತಿ ಯೋಜನೆ (Tuition Fee Waiver Scheme) ಯಡಿಯಲ್ಲಿ ಸೀಟುಗಳನ್ನು ಹಂಚಿಕೆ ಮಾಡಲು ಪೋಷಕರ ಆದಾಯ ಮಿತಿಯನ್ನು ಪರಿಷ್ಕರಿಸಿ ಈ ಕೆಳಕಂಡಂತೆ ಮರುನಿಗಧಿಪಡಿಸಿ ಆದೇಶಿಸಿದೆ.

- 6 JUN 2019

| | |
|---|---|
| ಮೊದಲನೇ ವರ್ಗ | ಬೋಧನಾ ಶುಲ್ಕ ವಿನಾಯಿತಿ ಯೋಜನೆ (Supernumerary quota) ಯಡಿ ಪ್ರತ್ಯೇಕವಾಗಿ ಅರ್ಹತಾ ಪಟ್ಟಿ ತಯಾರು ಮಾಡಿಕೊಂಡು ಮೊದಲಿಗೆ ವಾರ್ಷಿಕ ಆದಾಯ ರೂ.2.50 ಲಕ್ಷಕ್ಕೆ ಮೀರದ ಪೋಷಕರ ಅಭ್ಯರ್ಥಿಗಳಿಗೆ ಸೀಟು ಹಂಚಿಕೆ ಮಾಡುವುದು. |
| ಎರಡನೇ ವರ್ಗ | ಮೊದಲನೇ ವರ್ಗದಡಿಯಲ್ಲಿ ಸೀಟು ಹಂಚಿಕೆ ಮುಕ್ತಾಯವಾದ ನಂತರ ಉಳಿಯುವ ಸೀಟುಗಳನ್ನು ವಾರ್ಷಿಕ ಆದಾಯ ರೂ.2.50 ಲಕ್ಷದಿಂದ ರೂ.3.50 ಲಕ್ಷದವರೆಗಿನ ಪೋಷಕರ ಅಭ್ಯರ್ಥಿಗಳಿಗೆ ಸೀಟು ಹಂಚಿಕೆ ಮಾಡುವುದು. |
| ಮೂರನೇ ವರ್ಗ | 2ನೇ ವರ್ಗದಡಿಯಲ್ಲಿ ಸೀಟು ಹಂಚಿಕೆ ಮುಕ್ತಾಯವಾದ ನಂತರ ಉಳಿಯುವ ಸೀಟುಗಳನ್ನು ವಾರ್ಷಿಕ ಆದಾಯ ರೂ.3.50 ಲಕ್ಷದಿಂದ ರೂ.4.50 ಲಕ್ಷದವರೆಗಿನ ಪೋಷಕರ ಅಭ್ಯರ್ಥಿಗಳಿಗೆ ಸೀಟು ಹಂಚಿಕೆ ಮಾಡುವುದು. |
| ನಾಲ್ಕನೇ ವರ್ಗ | 3ನೇ ವರ್ಗದಡಿಯಲ್ಲಿ ಸೀಟು ಹಂಚಿಕೆ ಮುಕ್ತಾಯವಾದ ನಂತರ ಉಳಿಯುವ ಸೀಟುಗಳನ್ನು ವಾರ್ಷಿಕ ಆದಾಯ ರೂ.4.50 ಲಕ್ಷದಿಂದ ರೂ.6.00 ಲಕ್ಷದವರೆಗಿನ ಪೋಷಕರ ಅಭ್ಯರ್ಥಿಗಳಿಗೆ ಸೀಟು ಹಂಚಿಕೆ ಮಾಡುವುದು. |
| ಐದನೇ ವರ್ಗ | 4ನೇ ವರ್ಗದಡಿಯಲ್ಲಿ ಸೀಟು ಹಂಚಿಕೆ ಮುಕ್ತಾಯವಾದ ನಂತರ ಉಳಿಯುವ ಸೀಟುಗಳನ್ನು ವಾರ್ಷಿಕ ಆದಾಯ ರೂ.6.00 ಲಕ್ಷದಿಂದ ರೂ.8.00 ಲಕ್ಷದವರೆಗಿನ ಪೋಷಕರ ಅಭ್ಯರ್ಥಿಗಳಿಗೆ ಸೀಟು ಹಂಚಿಕೆ ಮಾಡುವುದು. |

<u>ನಿಬಂಧನೆಗಳು:</u>

1. ಎಲ್ಲಾ ಸರ್ಕಾರಿ/ವಿಶ್ವವಿದ್ಯಾಲಯ/ಅನುದಾನಿತ/ಖಾಸಗಿ ಅನುದಾನರಹಿತ (ಅಲ್ಪಸಂಖ್ಯಾತ ಹಾಗೂ ಅಲ್ಪಸಂಖ್ಯಾತವಲ್ಲದ) ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಎಐಸಿಟಿಇಯು ನಿಗದಿಪಡಿಸಬಹುದಾದ ಪ್ರತಿ ಕೋರ್ಸುಗಳ ಒಟ್ಟು ಪ್ರವೇಶ ಮಿತಿಯ ಮೇಲೆ ಶೇ. 5ರಷ್ಟು ಸಂಖ್ಯಾಧಿಕ ಸೀಟುಗಳನ್ನು (supernumerary seats) ಬೋಧನಾ ಶುಲ್ಕವಿಲ್ಲದೆ (tuition fee waiver schemes) ಪ್ರತಿಭಾನ್ವಿತ ಬಡ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ ಮೇಲಿನ ಕೋಷ್ಟಕದ ಮಿತಿಯೊಳಗಿರುವ ಫಲಾನುಭವಿಗಳಿಗೆ ಮೆರಿಟ್ ಆಧಾರದ ಮೇಲೆ ಸೀಟನ್ನು ಹಂಚಿಕೆ ಮಾಡಲಾಗುವುದು.

2. ರಾಜ್ಯ ಸರ್ಕಾರವು ನಿಗದಿಪಡಿಸಿರುವ ಬೋಧನಾ ಶುಲ್ಕವನ್ನು ಈ ಫಲಾನುಭವಿಯು ಭರಿಸತಕ್ಕದ್ದಲ್ಲ. ಆದರೆ ಈ ಅಭ್ಯರ್ಥಿಯು ವಿಶ್ವವಿದ್ಯಾಲಯ ಶುಲ್ಕವನ್ನು ಮಾತ್ರ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಪಾವತಿಸತಕ್ಕದ್ದು.

3. ಎಐಸಿಟಿಇಯ ಈ ಯೋಜನೆಯು ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿನ ಪ್ರತಿ ಕೋರ್ಸುಗಳಲ್ಲೂ ಶೇ.5ರಷ್ಟನ್ನು ಸಂಖ್ಯಾಧಿಕವಾಗಿ ಹಂಚಿಕೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಅರ್ಹರಾದವರಿಂದ ಮಾತ್ರ ಭರ್ತಿ ಮಾಡತಕ್ಕದ್ದು.

4. ಈ ಸೀಟುಗಳನ್ನು ಅರ್ಹ ಅಭ್ಯರ್ಥಿಗಳಿಗೆ ಅವರು ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಪಡೆದ ರ್‍ಯಾಂಕ್ ಆಧಾರದ ಮೇಲೆ ಹಂಚಿಕೆ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಸರ್ಕಾರವು ಅಧಿಕಾರವನ್ನು ನೀಡಲಾಗಿದೆ.

5. ಸಂಖ್ಯಾಧಿಕ ಸೀಟುಗಳಿಗೆ (supernumerary seats) ವಿದ್ಯಾರ್ಥಿಗಳ ಲಭ್ಯತೆ ಇಲ್ಲದಿದ್ದಲ್ಲಿ ಅದನ್ನು ಕಾಮೆಡ್-ಕೆ ಅಥವಾ ಆಡಳಿತ ಮಂಡಳಿ ಕೋಟಾ ಸೀಟುಗಳಾಗಿ ಪರಿವರ್ತಿಸತಕ್ಕದ್ದಲ್ಲ ಹಾಗೂ ಈ ಪ್ರವೇಶಾತಿಗಳಿಗೆ 2ನೇ ವರ್ಷದ ಲ್ಯಾಟರಲ್ ಎಂಟ್ರಿಗೂ ಪರಿಗಣಿಸತಕ್ಕದ್ದಲ್ಲ.

6. ಈ ವರ್ಗದಡಿ ಪ್ರವೇಶ ಪಡೆದ ವಿದ್ಯಾರ್ಥಿಗಳ ವಿವರಗಳನ್ನೊಳಗೊಂಡ ಪಟ್ಟಿಯನ್ನು ಸಂಬಂಧಪಟ್ಟ ಶಿಕ್ಷಣ ಸಂಸ್ಥೆಗಳಿಗೆ ಮತ್ತು ತಾಂತ್ರಿಕ ಶಿಕ್ಷಣ ನಿರ್ದೇಶಕರಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನೀಡತಕ್ಕದ್ದು.

7. ಈ ವರ್ಗದಡಿ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳು ಯಾವುದೇ ಕಾರಣದಿಂದ ಶಿಕ್ಷಣ ಸಂಸ್ಥೆಗಳು / ಕೋರ್ಸುಗಳ ಬದಲಾವಣೆಗೆ ಅವಕಾಶ ಇರತಕ್ಕದ್ದಲ್ಲ.

8. ಈ ವರ್ಗದಡಿ ಪ್ರವೇಶ ಪಡೆದ ವಿದ್ಯಾರ್ಥಿಗಳ ಮಾಹಿತಿಯನ್ನು ಶಿಕ್ಷಣ ಸಂಸ್ಥೆಗಳ ಅಂತರಜಾಲದಲ್ಲಿ ಪ್ರಕಟಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

30/5/19

(ಮನೋರಮ ಡಿ.ಸಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).

ಗೆ:

30/5/19

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ರವರು ಕಳುಹಿಸಿ ಇದನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ ಸರ್ಕಾರಕ್ಕೆ 100 ಪ್ರತಿಗಳನ್ನು ಕಳುಹಿಸಲು ಕೋರಿದೆ.

ಪ್ರತಿ:

1. ಕುಲಪತಿಗಳು, ವಿಶ್ವೇಶ್ವರಾಯ ತಾಂತ್ರಿಕ ವಿಶ್ವವಿದ್ಯಾಲಯ, ಜ್ಞಾನಗಂಗೋತ್ರಿ, ಬೆಳಗಾವಿ/ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು.
2. ಕಾರ್ಯಕಾರಿ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
3. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ, ವಿಧಾನಸೌಧ, ಬೆಂಗಳೂರು.
5. ಅಧ್ಯಕ್ಷರು, ಕರ್ನಾಟಕ ಅನುದಾನರಹಿತ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳ ಸಂಘ, ಕಾಮೆಡ್-ಕೆ ಕಛೇರಿ ಆವರಣ, 17ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
6. ಅಧ್ಯಕ್ಷರು, ಕರ್ನಾಟಕ ಭಾಷಾ ಮತ್ತು ಮತೀಯ ಅಲ್ಪಸಂಖ್ಯಾತ ವೃತ್ತಿಪರ ಕಾಲೇಜುಗಳ ಸಂಘ, ಫ್ಲಾಟ್ ನಂ.143, 4ನೇ ಮಹಡಿ, ಸೂರ್ಯಮುಖಿ, ಗಾರ್ಡನ್ ಅಪಾರ್ಟ್‌ಮೆಂಟ್, #21, ವಿಠ್ಠಲ ಮಲ್ಯ ರಸ್ತೆ, ಬೆಂಗಳೂರು-560001.
7. ಎಲ್ಲಾ ಸರ್ಕಾರಿ / ವಿಶ್ವವಿದ್ಯಾಲಯ / ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ತಾಂತ್ರಿಕ ಶಿಕ್ಷಣ ನಿರ್ದೇಶಕರ ಮುಖಾಂತರ).
8. ಎಲ್ಲಾ ವಿಶ್ವವಿದ್ಯಾಲಯಗಳ ಕುಲಸಚಿವರುಗಳಿಗೆ.
9. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ರವರ ಆಪ್ತ ಕಾರ್ಯದರ್ಶಿ.
11. ಸರ್ಕಾರದ ಉಪ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ) ರವರ ಆಪ್ತ ಸಹಾಯಕರು.
12. ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ (ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ)
13. ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿ.